515 ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ): ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರ ವ್ಯಾಪ್ತಿಯಲ್ಲಿ ಇದುವರೆವಿಗೆ ನೀಡಿರುವ ತಾತ್ಕಾಲಿಕ ಪಡಿತರ ಚೀಟಿಗಳು ಎಷ್ಟು;

ಆ) ತಾತ್ಕಾಲಿಕ ಪಡಿತರ ಚೀಟಿಗಳನ್ನು ಎಷ್ಟು ಅವಧಿಯವರೆಗೆ ಮುಂದುವರೆಸಲಾಗುವುದು;

ಇ) ಅರ್ಹ ಬಿಪಿಎಲ್ ಫಲಾನುಭವಿಗಳನ್ನು ಗುರುತಿಸಿ ಪಡಿತರ ಚೀಟಿ ನೀಡುವ ಕಾರ್ಯವನ್ನು ಎಂದಿನಿಂದ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಹೆಚ್. ಹಾಲಪ್ಪ (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು):

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರ ವ್ಯಾಪ್ತಿಯಲ್ಲಿ ಇದುವರೆಗೆ ನೀಡಿರುವ ತಾತ್ಕಾಲಿಕ ಪಡಿತರ ಚೀಟಿಗಳ ಸಂಖ್ಯೆ ಈ ಕೆಳಕಂಡಂತಿರುತ್ತದೆ:

ಎಎವೈ	– 5,859
ಅಕ್ಷಯ	– 54,741
ಎಪಿಎಲ್	– 21,167
ಒಟ್ಟು	**– 81,767**

ಆ) ಶಾಶ್ವತ ಪಡಿತರ ಚೀಟಿಗಳನ್ನು ವಿತರಣೆ ಮಾಡುವವರೆಗೆ ತಾತ್ಕಾಲಿಕ ಪಡಿತರ ಚೀಟಿಗಳನ್ನು ಮುಂದುವರೆಸಲಾಗುವುದು.

ಇ) ಈಗಾಗಲೇ ಅರ್ಹ ಬಿಪಿಎಲ್ ಫಲಾನುಭವಿಗಳನ್ನು ಗುರುತಿಸಿ ಪಡಿತರ ಚೀಟಿ ನೀಡುವ ಕಾರ್ಯ ಮುಕ್ತಾಯಗೊಂಡಿದೆ. (ನೆಮ್ಮದಿ ಕೇಂದ್ರ ಮುಖಾಂತರ ನೀಡಿರುವ ಬಿಪಿಎಲ್ ಕಾರ್ಡುಗಳನ್ನು ಹೊರತುಪಡಿಸಿ) ಸದ್ಯಕ್ಕೆ ಬಿಪಿಎಲ್ ಫಲಾನುಭವಿಗಳನ್ನು ಗುರುತಿಸುವ ಕಾರ್ಯ ಯಾವುದು ಇರುವುದಿಲ್ಲ.